ಆ) ಹಾಗಿದ್ದಲ್ಲಿ, 96-97ನೇ ಶೈಕ್ಷಣಿಕ ವರ್ಷದಿಂದ ಬನ್ನೂರು ಟೌನನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಪರಿಶೀಲಿಸಲಾಗುವುದು.

ಹುಬ್ಬಳ್ಳಿ ನಗರದಲ್ಲಿರುವ ಅನುದಾನಿತ ಪ್ರೌಢಶಾಲೆಗಳು

153 - ಶ್ರೀ ಆಶೋಕ ಕಾಟವೆ (ಹುಬ್ಬಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರದಲ್ಲಿರುವ ಅನುಧಾನಿತ ಪ್ರೌಢಶಾಲೆಗಳೆಷ್ಟು

ಆ) ಈ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರು ಎಷ್ಟು

ಇ) ಈ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು

ಈ) ಈ ಖಾಲಿ ಹುದ್ದೆಗಳನ್ನು ತುಂಬದಿರಲು ಕಾರಣವೇನು;

ಉ) ನಗರದಲ್ಲಿರುವ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ಅನುಮತಿ ನೀಡಿದೆಯೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 33.

ಆ) 428.

ಇ) 35.

ಈ) ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಅನುದಾನಿತ ಭೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಆರ್ಥಿಕ ಮಿತ ವ್ಯಯವನ್ನು ಸಡಿಲಿಸಿದೆ. ನಿಯಮಾನುಸಾರ ಆಡಳಿತ ಮಂಡಳಿಗಳು ನೇಮಕಾತಿ ಮಾಡಿಕೊಳ್ಳಬೇಕಾಗುತ್ತಿದೆ. ಹೀಗಿದ್ದರೂ ಭೋಧಕ ಹುದ್ದೆಗಳಿ ಖಾಲಿ ಇರುವುದಕ್ಕೆ ಸಂಬಂಧಿಸಿದ ಆಡಳಿತ ಮಂಡಳಿಗಳೇ ಕಾರಣ.

ಉ) ಮೇಲಿನ (ಈ) ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಬೆಂಗಳೂರು ನಗರದಲ್ಲಿ ಗಿಡಮರಗಳನ್ನು ನೆಡುವ ಕಾರ್ಯಕ್ರಮ

154 - ಶ್ರೀ ಆರ್. ಕೃಷ್ಣಪ್ಪ(ಜಯಮಹಲ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?